### 88. ಎರಡು ವರ್ಷಗಳಲ್ಲಿ ಹತ್ತು ಲಕ್ಷ ಮನೆ ನಿರ್ಮಾಣ

ರಾಜ್ಯದಲ್ಲಿ ಮುಂದಿನ ಎರಡು ವರ್ಷಗಳಲ್ಲಿ ನಗರ ಹಾಗೂ ಗ್ರಾಮೀಣ ಭಾಗ ಸೇರಿ ಹತ್ತು ಲಕ್ಷ ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡುವ ಗುರಿ ಹೊಂದಲಾಗಿದೆ ಎಂದು ವಸತಿ ಸಚಿವ ವಿ.ಸೋಮಣ್ಣ ತಿಳಿಸಿದರು.

ಮುಂದಿನ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ವಸತಿರಹಿತರಿಗೆ ಸೂರು ಒದಗಿಸಬೇಕು ಎಂಬುದು ಪ್ರಧಾನಿ ಮೋದಿ ಆಶಯ ಹಾಗೂ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಸಂಕಲ್ಪ ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಇಲಾಖೆ ಕಾರ್ಯಯೋಜನೆ ರೂಪಿಸಿದೆ. ವಸತಿ ಯೋಜನೆಗಳ ಸವಲತ್ತು ಅರ್ಹರಿಗೆ ತಲುಪಿಸಬೇಕು ಹಾಗೂ ದುರ್ಬಳಕೆಗೆ ಕಡಿವಾಣ ಹಾಕಬೇಕು ಎಂದು ಮುಖ್ಯಮಂತ್ರಿ ಸೂಚಿಸಿದ್ದರು. ಅದರಂತೆ ಐದು ಲಕ್ಷ ಮನೆಗಳು ರದ್ದಾಗಿದ್ದು, ಸರ್ಕಾರಕ್ಕೆ ರೂ.80,000 ಕೋಟಿ ಉಳಿತಾಯವಾಗಿದೆ. ಮುಂದಿನ ಎರಡು ವರ್ಷಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಹತ್ತು ಲಕ್ಷ ಮನೆಗಳ ನಿರ್ಮಾಣಕ್ಕೆ ರೂ.10,000 ಕೋಟಿ ಬೇಕಾಗಲಿದೆ.

**ಪ್ರಧಾನ ಮಂತ್ರಿ ಟೌನ್‌ಶಿಪ್:** ಬೆಂಗಳೂರು ನಗರ ಜಿಲ್ಲೆ ಜಿಗಣಿ ಹೋಬಳಿಯ ಸ್ವಾಮಿ ವಿವೇಕಾನಂದ ಯೋಗ ವಿಶ್ವವಿದ್ಯಾಲಯದ ಬಳಿ 1,938 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ಮೂಲ ಸವಲತ್ತು ಉಳ್ಳ 30,000 ನಿವೇಶನಗಳ ಪ್ರಧಾನಮಂತ್ರಿ ಟೌನ್‌ಶಿಪ್ ನಿರ್ಮಿಸಲಾಗುತ್ತಿದ್ದು, ಈಗಾಗಲೇ 37,000 ಅರ್ಜಿಗಳು ಸಲ್ಲಿಕೆಯಾಗಿವೆ.

ಟೌನ್‌ಶಿಪ್‌ನಲ್ಲಿ 100 ಎಕರೆ ವಿಸ್ತಾರದ ಪ್ರವಾಸಿ ಪಾರ್ಕ್‌ನ್ನು ಅಭಿವೃದ್ಧಿಪಡಿಸಲಿದ್ದು, ಮುತ್ಯಾಲಮಡು ಬಳಸಿಕೊಂಡು ಸುಂದರ ಸರೋವರ ಹಾಗೂ ಅದರ ಮಧ್ಯದಲ್ಲಿ ಸ್ವಾಮಿ ವಿವೇಕಾನಂದರ 120 ಅಡಿ ಎತ್ತರದ ಪ್ರತಿಮೆ ಸ್ಥಾಪಿಸಲು ಉದ್ದೇಶಿಸಲಾಗಿದೆ ಎಂದರು.

**ಕೊಳೆಗೇರಿ ಮತ್ತು ಕರ್ನಾಟಕದ ಗುರಿ:** ರಾಜ್ಯದ 2,700 ಕೊಳಚೆ ಪ್ರದೇಶಗಳಲ್ಲಿ ಹಂತ ಹಂತವಾಗಿ ಸುಸಜ್ಜಿತ ವಸತಿ ಬಡಾವಣೆ ನಿರ್ಮಿಸಿ ಕೊಳೆಗೇರಿ ಮುಕ್ತ ಕರ್ನಾಟಕವನ್ನಾಗಿ ಮಾಡುವ ಗುರಿಯಿದೆ. ಈ ನಿಟ್ಟಿನಲ್ಲಿ ಮೊದಲ ಭಾಗವಾಗಿ 757 ಕೊಳೆಗೇರಿಗಳಲ್ಲಿ 1.80 ಲಕ್ಷ ಮನೆಗಳನ್ನು ನಿರ್ಮಿಸಲು 2,700 ಎಕರೆ ಜಮೀನು ವಶಪಡಿಸಿಕೊಂಡಿದ್ದು, 48,000 ಮನೆಗಳ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದರೆ 39,000ಮನೆಗಳ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ ಎಂದು ಹೇಳಿದರು.

**ರೇರಾಗೆ ಬಲ:** ರಿಯಲ್ ಎಸ್ಟೇಟ್ ನಿಯಂತ್ರಣ ಮತ್ತು ಅಭಿವೃದ್ಧಿ ಕಾಯ್ದೆ (ರೇರಾ)ಗೆ ಇನ್ನಷ್ಟು ಶಕ್ತಿ ತುಂಬುವುದಕ್ಕಾಗಿ ಕೆಲವು ನಿಯಮಗಳ ಪರಿಷ್ಕರಣೆ ಅಗತ್ಯವಿದೆ. ಮುಖ್ಯವಾಗಿ ಖರೀದಿದಾರರ ಹಿತರಕ್ಷಣೆ ಹಾಗೂ ವಂಚಿಸಿದವರ ವಿರುದ್ಧ ಕಠಿಣ ಕ್ರಮವಹಿಸುವ ಚಿಂತನೆಯಿದೆ ಎಂದರು. ನಿಯಮಗಳ ಪರಿಷ್ಕರಣೆ ಪರಿಶೀಲಿಸಿ ವರದಿ ಸಲ್ಲಿಸಲಿದೆ. ನಂತರ ಸಚಿವ ಸಂಪುಟದ ಸಭೆ ಒಪ್ಪಿಗೆ ಪಡೆದು ಅಧಿವೇಶನದಲ್ಲಿ ಮಂಡಿಸಲು ಯೋಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಆಧಾರ:ಉದಯವಾಣಿ, ದಿನಾಂಕ:31.05.2020